## ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಮೇಲ್ಸೇತುವೆ ಕಾಮಗಾರಿ

# ನೀರಿನಲ್ಲಿ ಕೊಚ್ಚಿ ಹೋಗುವ ಸಾಧ್ಯತೆ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಬಿಬಿಎಂಪಿಯು ನಗರದ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ನಿರ್ಮಿಸುತ್ತಿರುವ ಮೇಲ್ಸೇತುವೆ ಕಾಮಗಾರಿ ಮತ್ತೆ ನೀರಿನಲ್ಲಿ ಕೊಚ್ಚಿ ಹೋಗುವ ಅಪಾಯವಿದೆ!

ಮೈಸೂರು ರಸ್ತೆ ಹಾಗೂ ಪಶ್ಚಿಮ ಕಾರ್ಡ್ ರಸ್ತೆಗೆ ಸಂಪರ್ಕ ಕಲ್ಪಿಸುವ ದೀಪಾಂಜಲಿ ನಗರದಲ್ಲಿ ಹೆಚ್ಚಿರುವ ವಾಹನ ದಟ್ಟಣೆಯನ್ನು ಕಡಿಮೆಗೊಳಿಸುವ ಉದ್ದೇಶದಿಂದ ಕೈಗೆತ್ತಿಕೊಂಡಿರುವ ಈ ಮೇಲ್ಸೇತುವೆ ಕಾಮಗಾರಿ ಶೇ 90 ರಷ್ಟು ಪೂರ್ಣಗೊಂಡ ಬಳಿಕ, ತಾಂತ್ರಿಕ ದೋಷ ಕಂಡು ಬಂದಿರುವುದು ಪಾಲಿಕೆಯನ್ನು ಚಿಂತೆಗೀಡು ಮಾಡಿದೆ.

ಗಾಳಿ ಆಂಜನೇಯಸ್ವಾಮಿ ದೇವಸ್ಥಾನದೊಳಗೆ ಮಳೆ ನೀರು ಮತ್ತು ವೃಷಭಾವತಿ ಕಾಲುವೆಯ ನೀರು ನುಗ್ಗದಂತೆ ತಡೆಯಲು ಈ ಸೇತುವೆ ಸಹಕಾರಿಯಾಗಬಹುದು ಎಂದು ಭಾವಿಸಲಾಗಿತ್ತು. ಅಲ್ಲದೆ, ಈ ವೃತ್ತದಲ್ಲಿರುವ ಸಂಚಾರ ದಟ್ಟಣೆಯನ್ನು ಕಡಿಮೆಗೊಳಿಸುವ ಸಲುವಾಗಿಯೇ ಈ ಸೇತುವೆ ನಿರ್ಮಾಣ ಯೋಜನೆಯನ್ನು ಸಿದ್ಧಪಡಿಸಲಾಗಿತ್ತು. ಆದರೆ, ಸದ್ಯಕ್ಕೆ ಈ ಯೋಜನೆಯಲ್ಲಿ ತಾಂತ್ರಿಕ ದೋಷ ಇರುವುದನ್ನು ಪಾಲಿಕೆಯ ತಾಂತ್ರಿಕ ಸಲಹಾ ಸಮಿತಿಯು ಪತ್ತೆ ಹಚ್ಚಿದೆ.

ದೇವಸ್ಥಾನಕ್ಕೆ ಹೊಂದಿಕೊಂಡಂತಿರುವ ಕೆಲವೇ ಮೀಟರ್‌ನಷ್ಟು ಕಾಮಗಾರಿ ಬಾಕಿ ಇರುವ ಸಂದರ್ಭದಲ್ಲಿ ತಾಂತ್ರಿಕ ದೋಷ ಕಂಡು ಬಂದಿರುವುದರಿಂದ ಈ ಮೇಲ್ಸೇತುವೆಯ ಭವಿಷ್ಯವೇ ಇದೀಗ ತೂಗುಯ್ಯಾಲೆಯಲ್ಲಿದೆ. ಪಶ್ಚಿಮ ಕಾರ್ಡ್ ರಸ್ತೆಯ ತುದಿಯಲ್ಲಿ 30 ರಿಂದ 35 ಅಡಿಗಳಷ್ಟು ಎತ್ತರವಿರುವ ಮೇಲ್ಸೇತುವೆಯು ಮತ್ತೊಂದು ತುದಿಯಲ್ಲಿ ಚರಂಡಿ ನೀರಿನ ಕಾಲುವೆಗೆ ತಾಗುವಂತಿದೆ. ಇದರಿಂದ ಮಳೆಗಾಲದಲ್ಲಿ ವೃಷಭಾವತಿ ಕಾಲುವೆ ತುಂಬಿ ಹರಿಯುವ ಸಂದರ್ಭದಲ್ಲಿ ಸೇತುವೆ ಮೇಲೂ ನೀರು ಉಕ್ಕಿ ಹರಿಯುವ ಸಾಧ್ಯತೆಯಿದೆ ಎಂದು ಶಂಕಿಸಲಾಗಿದೆ.

'ಪ್ರಸ್ತುತ ಪಾಲಿಕೆಯ ತಾಂತ್ರಿಕ ಸಲಹಾ ಸಮಿತಿಯು ಯೋಜನೆಯನ್ನು ಪರಿಶೀಲಿಸುತ್ತಿದೆ. ಮುಂದೇನು ಮಾಡಬೇಕು ಎನ್ನುವುದರ ಬಗ್ಗೆ ಇನ್ನೂ ಯಾವುದೇ ನಿರ್ಧಾರ ಕೈಗೊಂಡಿಲ್ಲ. ಈ ನಡುವೆ, ಯೋಜನೆಯ ಕೊನೆಯ ಹಂತದ ಕಾಮಗಾರಿಯ ವಿನ್ಯಾಸವನ್ನು ಬದಲಿಸಲು ಕೂಡ ಸಮಿತಿಯು ಚಿಂತನೆ ನಡೆಸಿದೆ' ಎಂದು ಬಿಬಿಎಂಪಿ ಮೂಲಗಳು ತಿಳಿಸಿವೆ.

ಒಟ್ಟು 18.30 ಕೋಟಿ ರೂಪಾಯಿ ವೆಚ್ಚದ ಮೇಲ್ಸೇತುವೆ ನಿರ್ಮಾಣ ಕಾಮಗಾರಿಯ ಗುತ್ತಿಗೆಯನ್ನು 2006ರ ನವೆಂಬರ್‌ನಲ್ಲಿ ಎನ್ ಪಿಸಿಸಿ ಲಿಮಿಟೆಡ್‌ಗೆ ವಹಿಸಲಾಗಿತ್ತು. 2008ರ ಫೆಬ್ರವರಿಯಲ್ಲಿ ಕಾಮಗಾರಿ ಪೂರ್ಣಗೊಳ್ಳಬೇಕಿತ್ತು. ಆದರೆ, ಆರಂಭದಲ್ಲಿ ಎದುರಾದ ಅಡ್ಡಿ- ಆತಂಕಗಳಿಂದ ಕಾಮಗಾರಿ ವಿಳಂಬಗೊಂಡಿತು.



ನಗರದ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಸಮೀಪ ನಿರ್ಮಿಸುತ್ತಿರುವ ಮೇಲ್ಸೇತುವೆ ಕಾಮಗಾರಿಯ ಒಂದು ದೃಶ್ಯ. -ಪ್ರಜಾವಾಣಿ ಚಿತ್ರ



ನಗರದ ಗಾಳಿ ಆಂಜನೇಯಸ್ವಾಮಿ ದೇವಸ್ಥಾನದ ಸಮೀಪ ಮಳೆ ನೀರಿನ ಕಾಲುವೆಯಲ್ಲಿ ತೆಗೆದ ಹೂಳು ಹಾಗೂ ಸುರಿದ ತ್ಯಾಜ್ಯ ವಿಲೇವಾರಿಯಾಗದೆ ಹಾಗೇ ಉಳಿದಿರುವುದು. -ಪ್ರಜಾವಾಣಿ ಚಿತ್ರ

ತಜ್ಞರ ಅಭಿಮತ: ಭಾರತೀಯ ವಿಜ್ಞಾನ ಸಂಸ್ಥೆಯ ಇಂಧನ ಮತ್ತು ಜೌಗು ಪ್ರದೇಶ ಸಂಶೋಧನಾ ಕೇಂದ್ರದ ಹಿರಿಯ ವಿಜ್ಞಾನಿ ಡಾ.ಟಿ.ವಿ.ರಾಮಚಂದ್ರ, 'ಈ ಬಾರಿಯೂ ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನದ ಬಳಿ ಪ್ರವಾಹ ತಪ್ಪಿದ್ದಲ್ಲ' ಎಂಬ ಸಂಶಯ ವ್ಯಕ್ತಪಡಿಸುತ್ತಾರೆ.

'ಈ ಮಳೆ ನೀರಿನ ಕಾಲುವೆಯನ್ನು ಒತ್ತುವರಿ ಮಾಡಿಕೊಂಡಿರುವುದರ ಜತೆಗೆ ಅದೇ ಜಾಗದಲ್ಲಿ ಮೇಲ್ಸೇತುವೆ ನಿರ್ಮಿಸುತ್ತಿರುವುದು ಪ್ರವಾಹ ಉಂಟಾಗಲು ಕಾರಣ' ಎಂದು ಅವರು ವಿಶ್ಲೇಷಿಸುತ್ತಾರೆ. ಇದಲ್ಲದೆ, ಸಾರ್ವಜನಿಕರು ತ್ಯಾಜ್ಯವನ್ನು ಕಾಲುವೆಗೆ ತಂದು ಸುರಿಯುತ್ತಿರುವುದು ಹಾಗೂ ತೆಗೆದ ಹೂಳನ್ನು ಹಾಗೇ ಬಿಟ್ಟಿರುವುದರಿಂದ ದೇವಸ್ಥಾನದ ಒಳಗೆ ನೀರು ನುಗ್ಗುವ ಅಪಾಯವಿದೆ' ಎಂದು ಎಚ್ಚರಿಸುತ್ತಾರೆ. ಕಳೆದ ವರ್ಷ ಕೂಡ ಮಳೆಗಾಲದಲ್ಲಿ ವೃಷಭಾವತಿ ಕಾಲುವೆಯು ಉಕ್ಕಿ ಹರಿದು ಗಾಳಿ ಆಂಜನೇಯ ದೇವಸ್ಥಾನದೊಳಗೆ ಮಳೆ ನೀರು ನುಗ್ಗಿ ಮಲಿನಗೊಂಡಿದ್ದನ್ನು ಇಲ್ಲಿ ಸ್ಮರಿಸಬಹುದು.